ಎಂ.ವಿ.ಸಿ. ನಂಃ 400/2024
ಪಿ.ಡಬ್ಲ್ಯೂ-2 (ಡಾ.ಬಶೀರಅಹ್ಮದ)

ದಿನಾಂಕ: 08-04-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಃ ಶ್ರೀ.ಎಚ್.ಬಿ.ಎಸ್. ಅರ್ಜಿದಾರ ಪರ ವಕೀಲರಿಂದಃ**

ನನ್ನ ಮುಖ್ಯ ವಿಚಾರಣೆಯ ಬಗ್ಗೆ ಪ್ರಮಾಣ ಪತ್ರ ಸಲ್ಲಿಸಿದ್ದು ಅದರಲ್ಲಿಯ ಸಂಗತಿಗಳು ಸತ್ಯವಾಗಿದ್ದು, ಅದಕ್ಕೆ ನಾನೇ ಸಹಿ ಮಾಡಿದ್ದೇನೆ.

ನಿಪಿ-8ನ್ನು ನಾನೇ ಕೊಟ್ಟಿರುತ್ತೇನೆ.

**ಪಾಟೀಸವಾಲುಃ ಶ್ರೀ.ಎಮ್.ಡಿ.ಟಿ. ಎದುರುದಾರ ಪರ ವಕೀಲರಿಂದಃ**

ಅಪಘಾತ ಆದ ದಿನ ಅರ್ಜಿದಾರರು ನಮ್ಮ ಆಸ್ಪತ್ರೆಗೆ ಬಂದಿರುವುದಿಲ್ಲ ಎಂದರೆ ಸರಿ. ಅರ್ಜಿದಾರರಿಗೆ ನಾನು ಚಿಕಿತ್ಸೆ ಕೊಟ್ಟಿಲ್ಲ ಎಂದರೆ ಸರಿ. ಅರ್ಜಿದಾರರಿಗೆ ದಿಃ 05/09/2024 ರಂದು ಅಂಗ ನ್ಯೂನ್ಯತೆ ಕೊಡಲು ಪರೀಕ್ಷೆ ಮಾಡಿರುತ್ತೇನೆ. ಅರ್ಜಿದಾರರಿಗೆ ಚಿಕಿತ್ಸೆ ಕೊಡದೇ ಇದ್ದರೂ ಸಹ ಅವರಿಗೆ ಅನುಕೂಲ ಆಗಲಿ ಎಂದು ಹೆಚ್ಚಿನ ಪ್ರಮಾಣದಲ್ಲಿ ಅಂಗ ನ್ಯೂನ್ಯತೆ ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ.

2. ಅರ್ಜಿದಾರರಿಗೆ ಯಾವುದೇ ಮೂಳೆ ಮುರಿತ ಆಗಿಲ್ಲ ಎಂದರೆ ಸರಿ. ಅರ್ಜಿದಾರರಿಗೆ ಮೂಳೆ ಮುರಿತ ಆಗದೇ ಇದ್ದರೂ ಸಹ 35% ರಷ್ಟು ಅಂಗ ನ್ಯೂನ್ಯತೆ ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಅರ್ಜಿದಾರರು ಚಿಕಿತ್ಸೆ ತೆಗೆದುಕೊಂಡ ಆಸ್ಪತ್ರೆಯಲ್ಲಿ ಯಾವುದೇ ಅಂಗ ನ್ಯೂನ್ಯತೆ ಬರುವುದಿಲ್ಲ ಎಂದು

ಹೇಳಿರುತ್ತಾರೆ ಎಂದರೆ ಸರಿಯಲ್ಲ. ಕೇಂದ್ರ ಸರಕಾರದ ಅಧಿಸೂಚನೆ ಪ್ರಕಾರ ನಾನು ಅರ್ಜಿದಾರರ ಅಂಗ ನ್ಯೂನ್ಯತೆಯನ್ನು ಕೊಟ್ಟಿರುವುದಿಲ್ಲ. ಅರ್ಜಿದಾರರಿಗೆ ಹೆಚ್ಚಿನ ಪರಿಹಾರ ಸಿಗಲಿ ಎಂದು ಸುಳ್ಳು ಪ್ರಮಾಣ ಪತ್ರವನ್ನು ಕೊಟ್ಟು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

3. ಅರ್ಜಿದಾರರಿಗೆ ಆದ ಗಾಯಗಳಿಗೆ ಯಾವುದೇ ಅಂಗ ನ್ಯೂನ್ಯತೆ ಬರುವುದಿಲ್ಲ ಎಂದರೆ ಸರಿಯಲ್ಲ. ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಹೇಳಿದಂತಹ ಯಾವುದೇ ತೊಂದರೆಗಳು ಅರ್ಜಿದಾರರಿಗೆ ಇರುವುದಿಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆ ಪ್ರಕಾರ ಬೆರಳಚ್ಚು ಮಾಡಲಾಗಿದೆ)

ಓ ಹೇ ಕೇ ಸರಿ ಇದೆ.

(ಉಮೇಶ ಎಸ್. ಅತನೂರೆ)
ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು
ಗೋಕಾಕ.

ಸಾಕ್ಷಿಯ ಸಹಿ